## ಕರ್ನಾಟಕ ಸರ್ಕಾರ ನಡವಳಿಗಳು

ವಿಷಯ : 2019-20ನೇ ಸಾಲಿನಲ್ಲಿ ನವ ರಾಷ್ಟ್ರೀಯ ಜೈವಾನಿಲ ಮತ್ತು ಸಾವಯವ ಗೊಬ್ಬರ ಕಾರ್ಯಕ್ರಮದಡಿ (NNBOMP) ಕೇಂದ್ರ ಸಹಾಯಧನವನ್ನು ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ :

1. ಸರ್ಕಾರದ ಪತ್ರ ಸಂಖ್ಯೆ ಗ್ರಾಅಪ 25 ಜೈಅಯೋ 2019, ದಿನಾಂಕ 27.05.2019.
2. MNRE ಪತ್ರ ಸಂಖ್ಯೆ E.File No.253/32/2019-Biogas, ದಿನಾಂಕ 05.09.2019.
3. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 26 ಆರ್‌ಇಪಿ 2019, ದಿನಾಂಕ 02.12.2019 & 29.11.2019.
4. MNRE ಪತ್ರ ಸಂಖ್ಯೆ E.File No.253/35/2019-Biogas, ದಿನಾಂಕ 30.09.2019.

**ಪ್ರಸ್ತಾವನೆ :**

ಮೇಲೆ ಓದಲಾದ(1)ರ ಪತ್ರದಲ್ಲಿ ಕೇಂದ್ರ ಸರ್ಕಾರವು ನವ ರಾಷ್ಟ್ರೀಯ ಜೈವಾನಿಲ ಮತ್ತು ಸಾವಯವ ಗೊಬ್ಬರ ಕಾರ್ಯಕ್ರಮದಡಿ (NNBOMP) ನಿಗದಿಪಡಿಸಿದ 7000 ಜೈವಾನಿಲ ಸ್ಥಾವರಗಳ ಭೌತಿಕ ಗುರಿಯನ್ನು ಜಿಲ್ಲೆಗಳಿಗೆ ಹಂಚಿಕೆ ಮಾಡಿದೆ.

ಓದಲಾದ (2)ರನ್ವಯ ಕೇಂದ್ರ ಸರ್ಕಾರವು 2019-20ನೇ ಸಾಲಿಗೆ ನವ ರಾಷ್ಟ್ರೀಯ ಜೈವಾನಿಲ ಮತ್ತು ಸಾವಯವ ಗೊಬ್ಬರ ಕಾರ್ಯಕ್ರಮ(NNBOMP) ದಡಿ ಸಾಮಾನ್ಯ ವರ್ಗದಡಿ ಬಿಡುಗಡೆ ಮಾಡಿದ ರೂ.360.00ಲಕ್ಷಗಳ ಕೇಂದ್ರ ಸಹಾಯಧನವನ್ನು ಓದಲಾದ (3)ರಲ್ಲಿ ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಿದೆ.

ಮುಂದುವರೆದು ಮೇಲೆ ಓದಲಾದ (4)ರಲ್ಲಿ ಕೇಂದ್ರ ಸರ್ಕಾರವು 2019-20ನೇ ಸಾಲಿಗೆ ಸಂಬಂಧಸಿದಂತೆ ಬಿಡುಗಡೆ ಮಾಡಿದ ರೂ.6.84ಲಕ್ಷ ಹಾಗೂ ಕಾರ್ಯಕ್ರಮದಡಿ ಲಭ್ಯವಿದ್ದ ಅನುದಾನ ರೂ.2.57ಲಕ್ಷ ಸೇರಿದಂತೆ ಒಟ್ಟಾರೆ ರೂ.9.41ಲಕ್ಷಗಳ ಕೇಂದ್ರ ಸಹಾಯಧನವನ್ನು ವಿಜಯಪುರ ಜಿಲ್ಲಾ ಪಂಚಾಯತ್ ಗೆ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/26/ಆರ್‌ಇಪಿ/2019(ಪಿ), ಬೆಂಗಳೂರು, ದಿನಾಂಕ 09.12.2019.**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ ಕೇಂದ್ರ ಸರ್ಕಾರವು 2019-20ನೇ ಸಾಲಿಗೆ ನವ ರಾಷ್ಟ್ರೀಯ ಜೈವಾನಿಲ ಮತ್ತು ಸಾವಯವ ಗೊಬ್ಬರ ಕಾರ್ಯಕ್ರಮ(NNBOMP)ದ ಬಿಡುಗಡೆ ಮಾಡಿದ ಕೇಂದ್ರ ಸಹಾಯಧನ ಹಾಗೂ ಕಾರ್ಯಕ್ರಮದಡಿ ಲಭ್ಯವಿರುವ ಅನುದಾನ ಸೇರಿದಂತೆ ಒಟ್ಟಾರೆ ರೂ.9.41ಲಕ್ಷ( **ಒಂಬತ್ತು ಲಕ್ಷದ ನಾಲ್ವತ್ತೊಂದು ಸಾವಿರ ರೂಪಾಯಿಗಳು ಮಾತ್ರ**)ಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ವಿಜಯಪುರ ರವರಿಗೆ ಬಿಡುಗಡೆ ಮಾಡಿ ಆದೇಶಿಸಿದೆ.

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟು ಬಿಡುಗಡೆ ಮಾಡಲಾಗುತ್ತಿದ್ದು, ಉದ್ದೇಶಿತ ಕಾರ್ಯಕ್ರಮಕ್ಕಾಗಿ ಮಾತ್ರ ವಿನಿಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ ಅನುದಾನವನ್ನು ಮಾರ್ಗಪಲ್ಲಟ ಮಾಡತಕ್ಕದಲ್ಲ.

**ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಸದರಿ ಅನುದಾನವನ್ನು ಗಾಂಧಿ ಸಾಕ್ಷಿ ಕಾಯಕದಡಿ ಇಂಧೀಕರಿಸುವುದು ಹಾಗೂ PFMS ತಂತ್ರಾಂಶದಲ್ಲೇ ಬಿಡುಗಡೆ ಮಾಡಲು ಕ್ರಮವಹಿಸತಕ್ಕದ್ದು.** ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನಕ್ಕೆ ಕಾರ್ಯಕ್ರಮದ ಮಾರ್ಗಸೂಚಿಯನ್ವಯ 2019-20 ನೇ ಸಾಲಿನಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಸಂಬಂಧಿಸಿದಂತೆ ಕೇಂದ್ರ ಸಹಾಯಧನ ಪಾವತಿಗಾಗಿಯೇ ವಿನಿಯೋಗಿಸಿ, ನಿಗದಿತ ನಮೂನೆಯಲ್ಲಿ ಹಣ ಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ನೀಡುವುದು

ಈ ಆದೇಶವನ್ನು ಇಲಾಖಾ ಅಂತರಿಕ ಆರ್ಥಿಕ ಸಲಹೆಗಾರರ ಸಹಮತಿ **ದಿನಾಂಕ 27.11.2019** ರಲ್ಲಿ ಸಹಮತಿಯನ್ನು ಪಡೆದು ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ. ರೇವಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು ಜಿಲ್ಲಾ ಪಂಚಾಯತ್, ವಿಜಯಪುರ.
3. ಇಲಾಖಾ ಗಣಕ ಕೇಂದ್ರ, ಗ್ರಾಅಪ ಇಲಾಖೆ.
4. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.

ಪ್ರತಿಯನ್ನು

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ.
2. ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾಅಪಂ, ಇಲಾಖೆ.